Volume : 9 | Issue : 146 | August : 25 : 2026 : Tuesday
ಸಂಪುಟ : ೨ | ಸಂಚಿಕೆ : 146 | ಆಗಸ್ಟ್ : 25 : 2026 : ಮಂಗಳವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ || VIKRAMA VAHINI
PRGI NO: KARKAN/2018/78481

'ಮಿಸ್ ಯೂನಿವರ್ಸ್ ಇಂಡಿಯಾ 2026' ಕಿರೀಟ ಮುಡಿಗೇರಿಸಿಕೊಂಡ ಕೇರಳದ ಕಾಜಿಯಾ ಅಜ್ ಮೆಜೊ, ಅಂತರರಾಷ್ಟ್ರೀಯ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ.

ನಾಗೇಂದ್ರ ರಾಜೀನಾಮೆಗೆ ಆಗ್ರಹ: ವಿಧಾನಸೌಧ ಮುತ್ತಿಗೆಗೆ ಬಿಜೆಪಿ ಯತ್ನ ಪುಟ 2

ಹನೂರು ಶೂಟೌಟ್: ಸಿಬಿಐ ತನಿಖೆಗೆ ಆಗ್ರಹ ಪುಟ 4

■ ಸುದ್ದಿ ಚುಟುಕು

ತಮಿಳುನಾಡಿಗೆ 9 ಸಾವಿರ ಕ್ಯೂಸೆಕ್ ಕಾವೇರಿ

● ವಿಕ್ರಮ ವಾಹಿನಿ । ನವದೆಹಲಿ

ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ಕರ್ನಾಟಕಕ್ಕೆ ಮತ್ತೆ ಹಿನ್ನಡೆಯಾಗಿದ್ದು, ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ಪ್ರತಿದಿನ 9,000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (CWRC) ಸೋಮವಾರ ಸೂಚಿಸಿದೆ.

ದೆಹಲಿಯಲ್ಲಿ ಅಫಖಅ ಅಧ್ಯಕ್ಷ ವಿನೀತ್ ಗುಪ್ತಾ ಅವರ ನೇತೃತ್ವದಲ್ಲಿ ನಡೆದ 141ನೇ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಆ.25ರಿಂದ 15 ದಿನಗಳ ಅವಧಿಯಲ್ಲಿ ಬಿಳಿಗೊಂಡ್ಲುವಿನಲ್ಲಿ ನಿಗದಿತ ಪ್ರಮಾಣದ ನೀರಿನ ಹರಿವು ಖಚಿತಪಡಿಸುವಂತೆ ಕರ್ನಾಟಕಕ್ಕೆ ಸೂಚಿಸಲಾಗಿದೆ.

ಈ ಹಿಂದೆ ಮೊದಲ ಹಂತದಲ್ಲಿ 3,000 ಕ್ಯೂಸೆಕ್ ಹಾಗೂ ಎರಡನೇ ಹಂತದಲ್ಲಿ 12,000 ಕ್ಯೂಸೆಕ್ ನೀರು ಹರಿಸುವಂತೆ ಕರ್ನಾಟಕಕ್ಕೆ ನಿರ್ದೇಶಿಸಲಾಗಿತ್ತು. ಇದೀಗ 12 ಸಾವಿರ ಕ್ಯೂಸೆಕ್‌ನಿಂದ 9 ಸಾವಿರ ಕ್ಯೂಸೆಕ್‌ಗೆ ಪ್ರಮಾಣ ಇಳಿಕೆಯಾಗಿದ್ದರೂ, ರಾಜ್ಯದ ಜಲಾಶಯಗಳ ನೀರಿನ ಲಭ್ಯತೆ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ಮತ್ತೆ ಒತ್ತಡ ಎದುರಾಗಿದೆ.

CWRCಯ ಈ ಶಿಫಾರಸಿನ ಕುರಿತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (CWMA) ಮಂಗಳವಾರ ನಡೆಯಲಿರುವ ಸಭೆಯಲ್ಲಿ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ಪಾಕ್ ಗ್ಯಾಂಗ್‌ಸ್ಟರ್ ಜತೆ ನಂಟು: ಎಸಿ ಮೆಕ್ಯಾನಿಕ್ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಪಾಕಿಸ್ತಾನ ಮೂಲದ ಗ್ಯಾಂಗ್‌ಸ್ಟರ್‌ಗಳು ಹಾಗೂ ಉಗ್ರರ ಜಾಲದೊಂದಿಗೆ ನಂಟು ಹೊಂದಿದ್ದ ಎಸಿ ಮೆಕ್ಯಾನಿಕ್ ನನ್ನು ದೊಡ್ಡಬಳ್ಳಾಪುರ ಟೌನ್ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದೊಡ್ಡಬಳ್ಳಾಪುರದ ಇಸ್ಲಾಂಪುರ ನಿವಾಸಿ ಎಸ್. ಸೈಯದ್ ಅಬೂಬಕರ್ (28) ಬಂಧಿತ ಆರೋಪಿಯಾಗಿದ್ದು,ಆತನನ್ನು ತೀವ್ರ ವಿಚಾರಣೆ ನಡೆಸಲಾಗಿದೆ.

ಕೇಂದ್ರೀಯ ತನಿಖಾ ಸಂಸ್ಥೆಗಳು ನೀಡಿದ ಗೌಪ್ಯ ಮಾಹಿತಿ ಆಧರಿಸಿ ದೊಡ್ಡಬಳ್ಳಾಪುರ ಟೌನ್ ಪೊಲೀಸರು ಕಾರ್ಯಾಚರಣೆ ನಡೆಸಿ ಬಂಧಿಸಿರುವ ಸೈಯದ್ ಅಬೂಬಕರ್ ಕಳೆದ ಎರಡು ವರ್ಷಗಳಿಂದ ಇನ್‌ಸ್ಟಾಗ್ರಾಮ್ ಮೂಲಕ ಪಾಕಿಸ್ತಾನಿ ಗ್ಯಾಂಗ್‌ಸ್ಟರ್‌ಗಳು ಮತ್ತು ಅಂತಾರಾಷ್ಟ್ರೀಯ ಕ್ರಿಮಿನಲ್ ಜಾಲದ ಸದಸ್ಯರೊಂದಿಗೆ ನಿರಂತರ ಸಂಪರ್ಕದಲ್ಲಿದ್ದನು.

ಅಲ್ಲದೆ, ಪಾಕಿಸ್ತಾನದ ಗ್ಯಾಂಗ್‌ಸ್ಟರ್‌ಗಳ ವೀಡಿಯೋಗಳನ್ನು ತನ್ನ ಇನ್‌ಸ್ಟಾಗ್ರಾಮ್ ಸ್ಟೇಟಸ್‌ಗಳಲ್ಲಿ ಹಂಚಿಕೊಳ್ಳುತ್ತಿದ್ದ ಈತ, ಅವರಿಗೆ ತನ್ನ ಗುರುತಿನ ಚೀಟಿ ಮತ್ತು ಪ್ರಮುಖ ವಿವರಗಳನ್ನು ಕಳುಹಿಸಿಕೊಟ್ಟಿದ್ದ ಎನ್ನಲಾಗಿದೆ. ಈತನ ಮೊಬೈಲ್ ಫೋನ್ ತಪಾಸಣೆ ನಡೆಸಿದಾಗ ಪಿಸ್ತೂಲ್‌ಗಳ ಹಲವಾರು ಫೋಟೋಗಳು ಪತ್ತೆಯಾಗಿವೆ.

ತೀವ್ರಗೊಂಡ ವಿಚಾರಣೆ:

ಪೊಲೀಸರ ಮಾಹಿತಿಯಂತೆ, ಆರೋಪಿ ಸೈಯದ್ ಅಬೂಬಕರ್ ದೆಹಲಿ ಮತ್ತು ಕೇರಳದಲ್ಲಿ ತರಬೇತಿ ಪಡೆದಿದ್ದು, ಮಸೀದಿಯೊಂದರಲ್ಲಿ ಪಾಠ ಕೂಡ ಮಾಡುತ್ತಿದ್ದನು. ಈತ ಸ್ಥಳೀಯವಾಗಿ ನೆಟ್‌ವರ್ಕ್ ಬೆಳೆಸಿಕೊಂಡು ಕಾನೂನುಬಾಹಿರ ಚಟುವಟಿಕೆಗಳು ಅಥವಾ ಅಕ್ರಮ ಹಣಕಾಸು ವಹಿವಾಟು ನಡೆಸಲು ಯೋಜನೆ ರೂಪಿಸಿದ್ದನು.

ಕಾರ್ಯಾಚರಣೆ ವೇಳೆ ಪೊಲೀಸರು ಈತನಿಂದ ಹಲವು ಮೊಬೈಲ್ ಫೋನ್‌ಗಳು, ಸಿಮ್ ಕಾರ್ಡ್‌ಗಳು ಮತ್ತು ಶಂಕಿತ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ, ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಕೇಂದ್ರೀಯ ತನಿಖಾ ಸಂಸ್ಥೆಗಳ ಅಧಿಕಾರಿಗಳು ಆತನನ್ನು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ.

ವಿವಿಧ ಪ್ರಕರಣ ದಾಖಲು:

ರಾಜ್ಯದಲ್ಲಿ ಅಥವಾ ದೇಶದ ಇನ್ಯಾವುದೇ ಭಾಗದಲ್ಲಿ ಈತನಿಗೆ ಸಹಾಯ ಮಾಡಿದವರು ಯಾರಾದರೂ ಇದ್ದಾರೆಯೇ ಎಂಬುದರ ಕುರಿತು ತನಿಖೆ ಮುಂದುವರಿದಿದೆ. ಬಂಧಿತನ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ (ಬಿಎನ್ ಎಸ್) ಉಗ್ರವಾದಿ ಕೃತ್ಯಗಳ ವಿಭಾಗ 113(3) ಹಾಗೂ ರಾಷ್ಟ್ರೀಯ ಏಕತೆಗೆ ಧಕ್ಕೆ ತರುವ ಕೃತ್ಯಗಳ ವಿಭಾಗ 197(2) ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

H1N1 ಹೆಚ್ಚಳ: ಭಯ ಬೇಡ

● ವಿಕ್ರಮ ವಾಹಿನಿ । ನವದೆಹಲಿ

ದೆಹಲಿ ಸೇರಿದಂತೆ ಉತ್ತರ ಭಾರತದ ಕೆಲವು ಭಾಗಗಳಲ್ಲಿ H1N1 ಸೋಂಕಿನ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜನರಲ್ಲಿ ಆತಂಕ ಮೂಡಿದೆ. ಆದರೆ ಪ್ರಸ್ತುತ ಹರಡುತ್ತಿರುವ H1N1 ಹೊಸ ವೈರಸ್ ಅಲ್ಲ ಹಾಗೂ ಹೆಚ್ಚು ಅಪಾಯಕಾರಿ ಸ್ವರೂಪ ಪಡೆದಿರುವುದಕ್ಕೆ ಯಾವುದೇ ಪುರಾವೆಗಳಿಲ್ಲ ಎಂದು ತಜ್ಞರು ಸ್ಪಷ್ಟಪಡಿಸಿದ್ದಾರೆ. ಜನರು ಭಯಪಡುವ ಬದಲು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ವೈದ್ಯರು ಸಲಹೆ ನೀಡಿದ್ದಾರೆ.

ವಿಶ್ವ ಆರೋಗ್ಯ ಸಂಸ್ಥೆಯ (WHO) ಮುಖ್ಯ ವಿಜ್ಞಾನಿ ಹಾಗೂ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯ (ICMR) ಮಾಜಿ ಮಹಾನಿರ್ದೇಶಕಿ ಡಾ. ಸೌಮ್ಯ ಸ್ವಾಮಿನಾಥನ್ ಮಾತನಾಡಿ, ಪ್ರಸ್ತುತ ಕಾಣಿಸಿಕೊಳ್ಳುತ್ತಿರುವ H1N1 ವೈರಸ್ ಹೊಸ ತಳಿಯಲ್ಲ. ಸಾಮಾನ್ಯವಾಗಿ ಕಂಡುಬರುವ ಈ ಸೋಂಕಿನಿಂದ ಬಹುತೇಕ ಮಂದಿ ಸೂಕ್ತ ಚಿಕಿತ್ಸೆ, ಔಷಧ ಹಾಗೂ ಸಾಕಷ್ಟು ವಿಶ್ರಾಂತಿಯ ಮೂಲಕ ಚೇತರಿಸಿಕೊಳ್ಳುತ್ತಾರೆ ಎಂದು ತಿಳಿಸಿದ್ದಾರೆ.



ಆದರೆ ವೃದ್ಧರು, ಮಕ್ಕಳು, ವಿಶೇಷವಾಗಿ ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನವರು, ಗರ್ಭಿಣಿಯರು ಹಾಗೂ ದೀರ್ಘಕಾಲದ ಕಾಯಿಲೆ ಹೊಂದಿರುವವರು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಅವರು ಹೇಳಿದ್ದಾರೆ. ಸೋಂಕಿನ ಲಕ್ಷಣಗಳು ಕಂಡುಬಂದರೆ ನಿರ್ಲಕ್ಷ್ಯ ಮಾಡದೆ ವೈದ್ಯರ ಸಲಹೆ ಪಡೆಯುವಂತೆ ಸೂಚಿಸಿದ್ದಾರೆ.

ಮಕ್ಕಳಲ್ಲಿ ಉಸಿರಾಟದ ತೊಂದರೆ, ತುಟಿ ಅಥವಾ ಉಗುರು ನೀಲಿ ಬಣ್ಣಕ್ಕೆ ತಿರುಗುವುದು, ಆಹಾರ ಅಥವಾ ನೀರು ಸೇವನೆ ಕಡಿಮೆಯಾಗುವುದು, ನಿರಂತರ ವಾಂತಿ ಹಾಗೂ ವಾಕರಿಕೆಯಂತಹ ಗಂಭೀರ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯಕೀಯ ನೆರವು ಪಡೆಯಬೇಕು ಎಂದು ಸೌಮ್ಯ ಸ್ವಾಮಿನಾಥನ್ ಸಲಹೆ ನೀಡಿದ್ದಾರೆ.

ಏಮ್ಸ್‌ನ ಮಾಜಿ ನಿರ್ದೇಶಕ ಡಾ. ರಂದೀಪ್ ಗುಲೇರಿಯಾ ಅವರ ಪ್ರಕಾರ, ದೆಹಲಿಯಲ್ಲಿ H1N1 ಪ್ರಕರಣಗಳು ಹೆಚ್ಚಾಗಿದ್ದರೂ ಮಾನ್ಸೂನ್ ಅವಧಿ ಮುಗಿಯುತ್ತಿದ್ದಂತೆ ಸೋಂಕಿನ ಪ್ರಮಾಣ ಇಳಿಕೆಯಾಗುವ ನಿರೀಕ್ಷೆಯಿದೆ. ಸೋಂಕಿತರು ಸಾಕಷ್ಟು ವಿಶ್ರಾಂತಿ ಪಡೆಯುವುದರ ಜತೆಗೆ ದೇಹದಲ್ಲಿ ನೀರಿನ ಕೊರತೆ ಉಂಟಾಗದಂತೆ ದ್ರವಾಹಾರ ಸೇವಿಸಬೇಕು ಹಾಗೂ ಎಲೆಕ್ಟ್ರೋಲೈಟ್ ಸಮತೋಲನ ಕಾಪಾಡಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದ್ದಾರೆ.

H1N1 ಸೋಂಕಿಗೆ ಸಾಮಾನ್ಯವಾಗಿ ಜ್ವರ, ಕೆಮ್ಮು, ಗಂಟಲು ನೋವು, ಮೈಕೈ ನೋವು, ತಲೆನೋವು ಹಾಗೂ ದೌರ್ಬಲ್ಯದಂತಹ ಲಕ್ಷಣಗಳು ಕಾಣಿಸಿಕೊಳ್ಳಬಹುದು. ಸೋಂಕು ಹರಡುವುದನ್ನು ತಡೆಯಲು ಕೈಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ಅನಾರೋಗ್ಯದ ಸಂದರ್ಭದಲ್ಲಿ ಇತರರಿಂದ ಅಂತರ ಕಾಯ್ದುಕೊಳ್ಳುವುದು ಹಾಗೂ ವೈದ್ಯರ ಸಲಹೆಯಂತೆ ಚಿಕಿತ್ಸೆ ಪಡೆಯುವುದು ಮುಖ್ಯವಾಗಿದೆ.

2009ರಲ್ಲಿ ಜಾಗತಿಕವಾಗಿ ಗಮನ ಸೆಳೆದ H1N1 ವೈರಸ್ ಇದೀಗ ಕಾಲಕಾಲಕ್ಕೆ ಹರಡುವ ಋತುಮಾನದ ಇನ್‌ಫ್ಲುಯೆನ್ಸಾ ಸೋಂಕಿನ ಭಾಗವಾಗಿ ಮುಂದುವರಿದಿದೆ. ಹೀಗಾಗಿ ಜನರು ಅನಗತ್ಯ ಆತಂಕಕ್ಕೆ ಒಳಗಾಗದೆ ಮುನ್ನೆಚ್ಚರಿಕೆ ವಹಿಸುವುದು ಸೂಕ್ತ ಎಂದು ತಜ್ಞರು ತಿಳಿಸಿದ್ದಾರೆ.

ಮಕ್ಕಳಿಗೆ, ವೃದ್ಧರಿಗೆ ಹೆಚ್ಚಿನ ಎಚ್ಚರಿಕೆ

ದೆಹಲಿ ಸೇರಿದಂತೆ ಉತ್ತರ ಭಾರತದ ಕೆಲವು ಭಾಗಗಳಲ್ಲಿ **H1N1** (ಹಂದಿಜ್ವರ) ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜನರಲ್ಲಿ ಆತಂಕ ಹೆಚ್ಚಾಗಿದೆ. ಆದರೆ ಇದು ಹೊಸ ವೈರಸ್ ಅಲ್ಲವಾಗಿದ್ದು, ಪ್ರಸ್ತುತ ಹರಡುತ್ತಿರುವ ತಳಿಯು ಹೆಚ್ಚು ಅಪಾಯಕಾರಿ ಎಂಬುದಕ್ಕೆ ಯಾವುದೇ ಪುರಾವೆಗಳಿಲ್ಲ ಎಂದು ತಜ್ಞರು ತಿಳಿಸಿದ್ದಾರೆ. ಸೋಂಕಿತರು ಸೂಕ್ತ ಚಿಕಿತ್ಸೆ, ಸಾಕಷ್ಟು ವಿಶ್ರಾಂತಿ ಹಾಗೂ ದ್ರವಾಹಾರ ಸೇವನೆಯಿಂದ ಚೇತರಿಸಿಕೊಳ್ಳಬಹುದು. ಆದಾಗ್ಯೂ, ವೃದ್ಧರು, 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು, ಗರ್ಭಿಣಿಯರು ಮತ್ತು ದೀರ್ಘಕಾಲದ ಕಾಯಿಲೆ ಹೊಂದಿರುವವರು ಹೆಚ್ಚಿನ ಮುನ್ನೆಚ್ಚರಿಕೆ ವಹಿಸಬೇಕು. ಮಕ್ಕಳಲ್ಲಿ ಉಸಿರಾಟದ ತೊಂದರೆ, ತುಟಿ ಅಥವಾ ಉಗುರು ನೀಲಿ ಬಣ್ಣಕ್ಕೆ ತಿರುಗುವುದು, ಆಹಾರ–ನೀರು ಸೇವನೆ ಕಡಿಮೆಯಾಗುವುದು ಸೇರಿದಂತೆ ಗಂಭೀರ ಲಕ್ಷಣಗಳು ಕಂಡುಬಂದರೆ ಕೂಡಲೇ ವೈದ್ಯರನ್ನು ಸಂಪರ್ಕಿಸುವಂತೆ ಸಲಹೆ ನೀಡಲಾಗಿದೆ.

ವಿಪಕ್ಷ ಪ್ರತಿಭಟನೆ ನಡುವೆ 3 ದಿನ ಮೊದಲೇ ಅಧಿವೇಶನ ಅಂತ್ಯ

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ–ಜೆಡಿಎಸ್ ಸದಸ್ಯರ ನಿರಂತರ ಪ್ರತಿಭಟನೆ ಹಾಗೂ ಗದ್ದಲದ ನಡುವೆಯೇ ಕರ್ನಾಟಕ ವಿಧಾನಮಂಡಲದ ಮಳೆಗಾಲದ ಅಧಿವೇಶನ ನಿಗದಿತ ಅವಧಿಗೆ ಮೂರು ದಿನ ಮೊದಲೇ ಸೋಮವಾರ ಅಂತ್ಯಗೊಂಡಿತು. ವಿಧಾನಸಭೆ ಹಾಗೂ ವಿಧಾನ ಪರಿಷತ್ ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಯಿತು.

ಆಗಸ್ಟ್ 13ರಿಂದ 27ರವರೆಗೆ ಅಧಿವೇಶನ ನಡೆಸಲು ವೇಳಾಪಟ್ಟಿ ನಿಗದಿಯಾಗಿತ್ತು. ಆದರೆ, ವಿಪಕ್ಷಗಳ ಪ್ರತಿಭಟನೆ, ಧರಣಿ ಹಾಗೂ ಆಡಳಿತ–ವಿಪಕ್ಷ ಸದಸ್ಯರ ನಡುವಿನ ವಾಗ್ವಾದದ ಹಿನ್ನೆಲೆಯಲ್ಲಿ ಸರ್ಕಾರ ಅಧಿವೇಶನವನ್ನು ಮುಂಚಿತವಾಗಿಯೇ ಮುಕ್ತಾಯಗೊಳಿಸಿದೆ ಎಂದು ವಿಪಕ್ಷಗಳು ಆರೋಪಿಸಿದವು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, "20–30 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ವಿಪಕ್ಷಗಳಿಗೆ ಹೆದರಿ ಸರ್ಕಾರ ಅಧಿವೇಶನದಿಂದ ಓಡಿದೆ" ಎಂದು ಟೀಕಿಸಿದರು. ಸದನವನ್ನು ಸಮರ್ಪಕವಾಗಿ ನಡೆಸಲು ಸಭಾಧ್ಯಕ್ಷರು ಅವಕಾಶ ನೀಡಲಿಲ್ಲ ಎಂದು ಆರೋಪಿಸಿದ ಅವರು, ವಾಲ್ಮೀಕಿ ನಿಗಮದ ಹಣ ಅಕ್ರಮ ಪ್ರಕರಣದಲ್ಲಿ ದಲಿತರ ಹಣವನ್ನು ವಾಪಸ್ ಪಡೆಯುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು.

ರಾಜ್ಯ ಸರ್ಕಾರ ಉದ್ಯಾನಗಳ ಶೇ.5ರಷ್ಟು ಜಾಗವನ್ನು ವಿವಿಧ ಉದ್ದೇಶಗಳಿಗೆ ಬಳಸಲು ಅವಕಾಶ ಕಲ್ಪಿಸುವ ತಿದ್ದುಪಡಿ ಸೇರಿದಂತೆ ಹಲವು ಜನವಿರೋಧಿ ನಿರ್ಧಾರಗಳನ್ನು ಕೈಗೊಳ್ಳುತ್ತಿದೆ ಎಂದು ಅಶೋಕ್ ಆರೋಪಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಸಚಿವ ಬಿ. ನಾಗೇಂದ್ರ ಅವರನ್ನು ಸರ್ಕಾರ ರಕ್ಷಿಸುತ್ತಿದೆ ಎಂದು ಆರೋಪಿಸಿದರು. ಪ್ರಕರಣದಲ್ಲಿ ಭ್ರಷ್ಟಾಚಾರ ನಡೆದಿರುವುದನ್ನು ಸರ್ಕಾರವೇ ಒಪ್ಪಿಕೊಂಡಿದ್ದರೂ ಸಚಿವರ ವಿರುದ್ಧ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಟೀಕಿಸಿದರು. ನಾಗೇಂದ್ರ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸುವವರೆಗೆ ಬಿಜೆಪಿ ಹೋರಾಟ ಮುಂದುವರಿಯಲಿದೆ ಎಂದು ಅವರು ಹೇಳಿದರು.

ಇದೇ ವೇಳೆ ಆರ್. ಅಶೋಕ್ ಮತ್ತು ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಬಿಜೆಪಿ ಶಾಸಕರು ವಿಧಾನಸೌಧದಿಂದ ಲೋಕಭವನದವರೆಗೆ ಪಾದಯಾತ್ರೆ ನಡೆಸಿ, ಸಚಿವ ಬಿ. ನಾಗೇಂದ್ರ ಅವರ ವಿರುದ್ಧದ ಆರೋಪಗಳ ಕುರಿತು ರಾಜ್ಯಪಾಲರಿಗೆ ದೂರು ಸಲ್ಲಿಸಿದರು. ಪಾದಯಾತ್ರೆಯಲ್ಲಿ ಜೆಡಿಎಸ್ ಶಾಸಕರೂ ಭಾಗವಹಿಸಿದ್ದರು.

ಅಧಿವೇಶನದ ಕೊನೆಯ ದಿನವೂ ವಿಪಕ್ಷಗಳ ಪ್ರತಿಭಟನೆ ಮುಂದುವರಿದ ಹಿನ್ನೆಲೆಯಲ್ಲಿ ಹಲವು ವಿಷಯಗಳ ಕುರಿತು ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ತೀವ್ರ ವಾಗ್ವಾದ ನಡೆಯಿತು. ಅಂತಿಮವಾಗಿ ಉಭಯ ಸದನಗಳ ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಯಿತು.

ಮತದಾರರ ಕರಡು ಪಟ್ಟಿ ಪ್ರಕಟ: 4.46 ಕೋಟಿ ಹೆಸರು ಸೇರ್ಪಡೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ನಡೆದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (SIR) ಮೊದಲ ಹಂತ ಪೂರ್ಣಗೊಂಡಿದ್ದು, ಕರಡು ಮತದಾರರ ಪಟ್ಟಿಯನ್ನು ಸೋಮವಾರ ಪ್ರಕಟಿಸಲಾಗಿದೆ. ರಾಜ್ಯದ ಒಟ್ಟು 5,54,32,314 ಮತದಾರರ ಪೈಕಿ 4,46,35,975 ಮಂದಿಯ ಹೆಸರು ಕರಡು ಪಟ್ಟಿಯಲ್ಲಿ ಸೇರ್ಪಡೆಯಾಗಿದೆ. ಪುರುಷರಿಗಿಂತ ಮಹಿಳಾ ಮತದಾರರ ಸಂಖ್ಯೆಯೇ ಹೆಚ್ಚಿದೆ.

ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿ, ಗೈರು, ಸ್ಥಳಾಂತರಗೊಂಡ, ಮೃತ ಹಾಗೂ ನಕಲಿ ಮತದಾರರು ಸೇರಿದಂತೆ ಎಸ್‌ಡಿಡಿಟಿ ವರ್ಗದ 1,07,96,339 ಹೆಸರುಗಳನ್ನು ಕರಡು ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದರು. ಕರಡು ಪಟ್ಟಿಯಲ್ಲಿ 2,21,59,240 ಪುರುಷರು, 2,24,73,864 ಮಹಿಳೆಯರು ಹಾಗೂ 2,871 ಇತರ ಮತದಾರರಿದ್ದಾರೆ.

43.81 ಲಕ್ಷ ಮಂದಿಗೆ ನೋಟಿಸ್

ಮ್ಯಾಪಿಂಗ್ ಆಗದ 23.45 ಲಕ್ಷ ಹಾಗೂ ಗಣತಿ ನಮೂನೆಯಲ್ಲಿ ಮಾಹಿತಿ ವ್ಯತ್ಯಾಸ ಕಂಡುಬಂದ 20.35 ಲಕ್ಷ ಸೇರಿದಂತೆ ಒಟ್ಟು 43.81 ಲಕ್ಷ ಮತದಾರರಿಗೆ ಇಂದಿನಿಂದ ನೋಟಿಸ್ ನೀಡಲಾಗುತ್ತದೆ. ನೋಟಿಸ್ ಪಡೆದವರು ನಿಗದಿತ ದಿನದಂದು ಮತಗಟ್ಟೆ ಅಥವಾ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಇಆರ್‌ಒ/ಎಆರ್‌ಒ ಮುಂದೆ ಹಾಜರಾಗಿ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ದಾಖಲೆಗಳ ಪರಿಶೀಲನೆಯ ಬಳಿಕ ಅರ್ಹರ ಹೆಸರು ಅಂತಿಮ ಪಟ್ಟಿಯಲ್ಲಿ ಸೇರ್ಪಡೆಯಾಗಲಿದೆ.

ರಾಜ್ಯದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಮೊದಲ ಹಂತ ಪೂರ್ಣಗೊಂಡಿದ್ದು, 4.46 ಕೋಟಿ ಮತದಾರರನ್ನು ಒಳಗೊಂಡ ಕರಡು ಪಟ್ಟಿ ಪ್ರಕಟವಾಗಿದೆ. 1.07 ಕೋಟಿ ಹೆಸರುಗಳನ್ನು ವಿವಿಧ ಕಾರಣಗಳಿಂದ ಕೈಬಿಡಲಾಗಿದ್ದು, ಮ್ಯಾಪಿಂಗ್ ಹಾಗೂ ದಾಖಲೆಗಳ ವ್ಯತ್ಯಾಸ ಹೊಂದಿರುವ 43.81 ಲಕ್ಷ ಮಂದಿಗೆ ನೋಟಿಸ್ ನೀಡಲಾಗುತ್ತಿದೆ. ಅಗತ್ಯ ದಾಖಲೆಗಳೊಂದಿಗೆ ವಿಚಾರಣೆಗೆ ಹಾಜರಾದ ಅರ್ಹ ಮತದಾರರ ಹೆಸರುಗಳನ್ನು ಅಂತಿಮ ಪಟ್ಟಿಯಲ್ಲಿ ಸೇರಿಸಲಾಗುತ್ತದೆ.

ನೋಟಿಸ್ ಪಡೆದವರು ನಿಗದಿತ ವಿಚಾರಣೆಗೆ ಹಾಜರಾಗದಿದ್ದರೆ ಮತ್ತೊಂದು ಅವಕಾಶ ನೀಡಲಾಗುತ್ತದೆ. ಎರಡನೇ ಅವಕಾಶದಲ್ಲೂ ಗೈರಾದರೆ ಕರಡು ಪಟ್ಟಿಯಿಂದ ಹೆಸರು ರದ್ದಾಗಲಿದೆ. ಹೆಸರು ಅಳಿಸಿ